ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಕಬ್ಬು ಬೆಳೆ ಬಗ್ಗೆ

ಶ್ರೀ ಆರ್.ಬಿ.ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು)

449 (429) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮುಧೋಳ ತಾಲ್ಲೂಕಿನಲ್ಲಿ ಕಬ್ಬನ್ನು ಬೆಳೆದಿರುವ ಜಮೀನಿನ ವಿಸ್ತೀರ್ಣವೆಷ್ಟು ; ಬೆಳೆದ ಕಬ್ಬನ್ನು ಕಟಾವು ಮಾಡಲು ತೆಗೆದುಕೊಳ್ಳುವ ಕಾಲಾವಕಾಶ ಎಷ್ಟು ;

(ಆ) ಕಬ್ಬು ಕಟಾವಿನ ನಂತರ ಕಟಾವಾದ ಕಬ್ಬನ್ನು ಕಾರ್ಖಾನೆಗೆ ಸಾಗಿಸುವವರು ಯಾರು ; ಕಟಾಯಿಸಿದ ಕಬ್ಬನ್ನು ಕಾರ್ಖಾನೆಯು ಸಾಗಿಸುತ್ತಿದ್ದಲ್ಲಿ ಅಳವಡಿಸಿಕೊಂಡಿರುವ ಮಾನದಂಡಗಳೇನು ; ಈ ಮಾನದಂಡಗಳನ್ನು ಅಳವಡಿಸಿಕೊಳ್ಳಲು ಆಧಾರಗಳೇನು ; ಕಬ್ಬನ್ನು ತೂಕ ಹಾಕುವಾಗ ನಿರುಪಯುಕ್ತವೆಂದು ಪರಿಗಣಿಸಲಾಗುವ ಪ್ರಮಾಣವೆಷ್ಟು ;

(ಇ) ಕಬ್ಬನ್ನು ಕಾರ್ಖಾನೆಗೆ ಸಾಗಿಸಿದ ನಂತರ ತೂಕ ಹಾಕುವಾಗ ತೂಕದಲ್ಲಿ ರೈತನಿಗೆ ಮೋಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ರೀತಿ ಮೋಸ ಮಾಡುತ್ತಿರುವ ಕಾರ್ಖಾನೆಗಳ ವಿರುದ್ಧ ಸರ್ಕಾರವು ಕೈಗೊಂಡಿರುವ ಹಾಗೂ ಕೈಗೊಳ್ಳುವ ಕ್ರಮಗಳೇನು ? (ವಿವರ ನೀಡುವುದು)